**ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹಾವೇರಿ.**

**ಸಿ.ಸಿ.ನಂ.418/2018**

| | | | |
|---|---|---|---|
| ಸಾಕ್ಷಿದಾರರ ಹೆಸರು | ಮಾರುತಿ ಹಣಜಿ | ಸಿಡಬ್ಲ್ಯೂ | 6 |
| ತಂದೆ ಹೆಸರು | ಮಲ್ಲಪ್ಪ | ಪಿಡಬ್ಲ್ಯೂ | 4 |
| ವಯಸ್ಸು | 62 ವರ್ಷ | | |
| ಉದ್ಯೋಗ | ವ್ಯಾಪಾರ | | |
| ವಾಸಸ್ಥಳ | ಬ್ಯಾಡಗಿ | | |

**ದಿಃ 04.03.2026 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಪ್ರಭಾರ ಹಿ.ಸ.ಸ.ಅಭಿಯೋಜಕರಿಂದ.**

1). ನನಗೆ ಚಾ.ಸಾ-7 ಮತ್ತು 1ನೇ ಆರೋಪಿಯ ಪರಿಚಯ ಇರುತ್ತದೆ. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ ಅದರಲ್ಲಿರುವ ಸಹಿ ತನ್ನದೇ ಇರುತ್ತದೆ ಎಂದು ಗುರುತಿಸಿದ್ದರಿಂದ ಸದರಿ ದಾಖಲಾತಿಯು ಆರೋಪಿಯು ತೋರಿಸಿದ ಸ್ಥಳದಲ್ಲಿ ತಯಾರಿಸಿದ ದಾಖಲಾತಿಯಾಗಿದ್ದು, ಅದನ್ನು ನಿ.ಪಿ-7 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ-7(ಎ) ಎಂದು ಗುರುತಿಸಲಾಯಿತು. ಸದರಿ ದಾಖಲಾತಿಯನ್ನು ಬರೆಯುವಾಗ ಎರಡು ಪೋಟೋಗಳನ್ನು ತೆಗೆಯಲಾಗಿದ್ದು, ಅದನ್ನು ನಿ.ಪಿ-8 ಮತ್ತು 9 ಎಂದು ಗುರುತಿಸಲಾಯಿತು. ಪೋಟೋಗಳನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ಗೊತ್ತಿರುವದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದರಿಂದ, ಪರಿಶೀಲಿಸಿ ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಹಿ.ಸ.ಸ.ಅಭಿಯೋಜಕರಿಂದ.**

2) ನಿ.ಪಿ-7 ದಾಖಲಾತಿಯಲ್ಲಿ ಬರೆದಿರುವ ಸಂಗತಿಗಳು ನನಗೆ ಗೊತ್ತಿದ್ದರೂ ಸಹ ನಾನು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ

ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ನಿ.ಪಿ-8 ಮತ್ತು 9 ಪೋಟೋ ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿದ್ದರೂ ಸಹ ಆ ಕುರಿತಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ನಿ.ಪಿ-7 ದಾಖಲಾತಿಗೆ ಚಾ.ಸಾ-7 ಇವರೂ ಸಹ ನನ್ನ ಸಮಕ್ಷಮ ಸಹಿ ಮಾಡಿದ್ದರೂ ಸಹ ಆ ಕುರಿತಾಗಿ ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೇ ಸರಿಯಲ್ಲ. ನಿ.ಪಿ-8 ಮತ್ತು 9 ಪೋಟೋಗಳನ್ನು 1 ನೇ ಆರೋಪಿಗೆ ಸೇರಿದ ಅಂಗಡಿ ಮತ್ತು ಕೋಲ್ಡ ಸ್ಟೋರೇಜ ಅಂಗಡಿಯ ಹತ್ತಿರ ತೆಗೆದಿದ್ದರೂ ಸಹ ಆ ಕುರಿತಾಗಿ ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. 1 ನೇ ಆರೋಪಿ ನಮ್ಮ ಊರಿನವನಾಗಿದ್ದರಿಂದ ನಿ.ಪಿ-7 ರಿಂದ 9 ದಾಖಲಾತಿಗಳ ಕುರಿತಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರವಾಗಿ ಪಾಟೀ ಸವಾಲು ಇರುವದಿಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೇ. ಸರಿ ಇದೆ.

ಎಂದು ಒಪ್ಪಿರುತ್ತಾರೆ.

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು

ಹಾವೇರಿ.